ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ,ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560 001**

ಸಂಖ್ಯೆ: ಎಡಿಎಂ2(2)/ಜಾಆಪ/34899/2014-15 ದಿನಾಂಕ: 21.05.2014.

## ಸುತ್ತೋಲೆ

ವಿಷಯ: ಶಾಲಾ ವಿದ್ಯಾರ್ಥಿಗಳಿಗೆ ಶಾಲೆಗಳಲ್ಲಿಯೇ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರ ಅ.ಸ.ಪತ್ರ ಸಂಖ್ಯೆ: ಕಂಇಸಿಎಸಿ/ಆಡಳಿತ-156/2012-13 ದಿನಾಂಕ:1.4.2014

-----------.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಶಾಲೆಗಳಲ್ಲಿಯೇ ನೀಡುವ ಅಭಿಯಾನವನ್ನು ರಾಜ್ಯ ಸರ್ಕಾರದಿಂದ ಆರಂಭಿಸಲಾಗಿದ್ದು, ಇಲ್ಲಿವರೆಗೆ ರಾಜ್ಯಾದ್ಯಂತ 49,63,790 ಅರ್ಜಿಗಳನ್ನು ವಿದ್ಯಾರ್ಥಿಗಳು ಸಲ್ಲಿಸಿರುತ್ತಾರೆ.

ಲೋಕ ಸಭಾ ಚುನಾವಣೆ ಹಿನ್ನಲೆಯಲ್ಲಿ ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲು ವಿಳಂಬವಾಗಿರುತ್ತದೆ. ಈ ಹಿನ್ನಲೆಯಲ್ಲಿ ಶಾಲಾ ದಾಖಲಾತಿ ಸಂದರ್ಭದಲ್ಲಿ ವಿವಿಧ ಕಾರಣಗಳಿಗಾಗಿ ವಿದ್ಯಾರ್ಥಿಗಳಿಂದ ಶಿಕ್ಷಣ ಇಲಾಖೆಯು ಜಾತಿ ಹಾಗೂ ಆದಾಯ ಪ್ರಮಾಣ ಪತ್ರ ಪಡೆಯುವ ಪ್ರಕ್ರಿಯೆಗೆ ಒಂದು ತಿಂಗಳ ವಿನಾಯಿತಿ ನೀಡಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಕೋರಿರುತ್ತಾರೆ.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ ಶಾಲೆಗಳಲ್ಲಿ ದಾಖಲಾತಿ ಹಾಗೂ ಇತರೆ ವಿಷಯಕ್ಕೆ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರವನ್ನು ಒಂದು ತಿಂಗಳು ತಡವಾಗಿ ಸಲ್ಲಿಸಲು ಅನುಮತಿ ನೀಡಲಾಗಿದೆ ಹಾಗೂ ಎಲ್ಲಾ ಅಂಶವನ್ನು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮುಖ್ಯಸ್ಥರಿಗೆ ತಿಳಿಸಲು ತಿಳಿಸಿದೆ.

**ಮಾನ್ಯ ಆಯುಕ್ತರ ಆದೇಶದ ಮೇರೆಗೆ** **ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)**

ಗೆ:

ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾ.ಶಿ.ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸಂ. 505, 5ನೇ ಮಹಡಿ, ಗೇಟ್ ನಂ.3, ಬಹುಮಹಡಿಗಳ ಕಟ್ಟಡ, ಬೆಂಗಳೂರು -1 ಇವರ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

SKR\\Typing3server\e\D\Adm2\387-14.doc